सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

## ರಾಜ್ಯ ಚುನಾವಣಾ ಆಯೋಗದ ನಡವಳಿಗಳು

ವಿಷಯ : ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಾರ್ವತ್ರಿಕ ಚುನಾವಣೆ – 2015 – ಸಂಬಂಧವಾಗಿ ದಿನಾಂಕ:25-6-2015 ರಂದು ಹೊರಡಿಸಿರುವ ಆದೇಶವನ್ನು ಹಿಂಪಡೆಯುವ ಬಗ್ಗೆ.

ಉಲ್ಲೇಖ : 1) ಆಯೋಗದ ಆದೇಶ ಸಂಖ್ಯೆ ರಾಚುಆ 29 ಇಯುಬಿ 2015 ದಿನಾಂಕ: 25-6-2015.

2) ಮಾನ್ಯ ಸರ್ವೋಚ್ಛ ನ್ಯಾಯಾಲಯದ ದಿ:3-7-2015ರ ಆದೇಶ.

-:-:-:-

**ಪ್ರಸ್ತಾವನೆ:**

ರಾಜ್ಯ ಚುನಾವಣಾ ಆಯೋಗವು ಉಲ್ಲೇಖ(1)ರಲ್ಲಿನ ದಿ:25-6-2015ರ ಆದೇಶ ಸಂಖ್ಯೆ: ರಾಚುಆ 29 ಇಯುಬಿ 2015ನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 198 ವಾರ್ಡುಗಳಿಗೆ ಚುನಾವಣೆಯನ್ನು ನಡೆಸಲು ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಿರುತ್ತದೆ.

ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿ:3-7-2015ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು 8 ವಾರಗಳ ಕಾಲಾವಕಾಶ ನೀಡಿ ಆದೇಶಿಸಿರುತ್ತದೆ. ಇದರಿಂದಾಗಿ ರಾಜ್ಯ ಚುನಾವಣಾ ಆಯೋಗವು ದಿ:25-6-2015ರಂದು ಹೊರಡಿಸಿದ್ದ ಚುನಾವಣಾ ವೇಳಾಪಟ್ಟಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ಅವಕಾಶವಿರುವುದಿಲ್ಲ. ಈ ಹಿನ್ನಲೆಯಲ್ಲಿ ರಾಜ್ಯ ಚುನಾವಣಾ ಆಯೋಗವು ಈ ಕೆಳಕಂಡಂತೆ ನಿರ್ಧರಿಸಿದೆ. ಅದರಂತೆ ಈ ಆದೇಶ,

**ಆದೇಶ ಸಂಖ್ಯೆ: ರಾಚುಆ 29 ಇಯುಬಿ 2015, ಬೆಂಗಳೂರು, ದಿ:4-7-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ರಾಜ್ಯ ಚುನಾವಣಾ ಆಯೋಗವು ಭಾರತ ಸಂವಿಧಾನದ ಅನುಚ್ಛೇದ 243 ಜಡ್‌ಎ ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ 1976ರ ಪ್ರಕರಣ 24ರಂತೆ ರಾಜ್ಯ ಚುನಾವಣಾ ಆಯೋಗವು ದಿ:25-6-2015ರ ಆದೇಶ ಸಂಖ್ಯೆ:ರಾಚುಆ 29 ಇಯುಬಿ 2015ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಾರ್ವತ್ರಿಕ ಚುನಾವಣೆಗಾಗಿ ಹೊರಡಿಸಿದ್ದ ಚುನಾವಣಾ ವೇಳಾಪಟ್ಟಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದಿದೆ. ಅಂತೆಯೇ ಮಾದರಿ ನೀತಿ ಸಂಹಿತೆಯನ್ನು ಸಹ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಮಾನ್ಯ ಸರ್ವೋಚ್ಛ ನ್ಯಾಯಾಲಯದ ದಿ:3-7-2015ರ ತೀರ್ಪಿನಲ್ಲಿ ನಿಗದಿಪಡಿಸಿದ ಕಾಲಮಿತಿಯೊಳಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಚುನಾವಣೆಯನ್ನು ನಡೆಸಲು ಚುನಾವಣಾ ವೇಳಾಪಟ್ಟಿಯನ್ನು ನಂತರ ಹೊರಡಿಸಲಾಗುವುದು.

ಆದೇಶಾನುಸಾರ

(ಕವಿತರಾಣಿ.ಆರ್) 4/7/15

ಅಧೀನ ಕಾರ್ಯದರ್ಶಿ

ರಾಜ್ಯ ಚುನಾವಣಾ ಆಯೋಗ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಈ ಆದೇಶವನ್ನು ಕೂಡಲೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಆಯೋಗಕ್ಕೆ ಕಳುಹಿಸಿಕೊಡುವಂತೆ ಕೋರಿದೆ.

**ಪ್ರತಿ:**

1. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು
2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
4. ಅಪರ ಆಯುಕ್ತರು (ಆಡಳಿತ) ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ಅಪರ / ಜಂಟಿ ಆಯುಕ್ತರು (ದಕ್ಷಿಣ) ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಅಪರ / ಜಂಟಿ ಆಯುಕ್ತರು (ಮಹದೇವಪುರ) ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.

– ರವರುಗಳಿಗೆ ಕಳುಹಿಸುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡುಗಳ ಎಲ್ಲಾ ಚುನಾವಣಾಧಿಕಾರಿ / ಅಧಿಕ ಚುನಾವಣಾಧಿಕಾರಿ ಮತ್ತು ಸಹಾಯಕ ಚುನಾವಣಾಧಿಕಾರಿಗಳ ಗಮನಕ್ಕೆ ಚುನಾವಣಾ ವೇಳಾಪಟ್ಟಿ ರದ್ದುಪಡಿಸಿರುವ ವಿಷಯವನ್ನು ಅಗತ್ಯ ಕ್ರಮಕ್ಕಾಗಿ ತಿಳಿಸಲು ಸೂಚಿಸಿದೆ ಹಾಗೂ ಈ ಬಗ್ಗೆ ಆಯೋಗಕ್ಕೆ ವರದಿ ಸಲ್ಲಿಸುವುದು.